ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1243

2] ಮಾನ್ಯ ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮ ನಿರ್ದೇಶನ ಹೊಂದಿದವರು)

3] ಉತ್ತರಿಸುವ ದಿನಾಂಕ : 23.12.2021

4] ಉತ್ತರಿಸುವ ಸಚಿವರು : ಗೃಹ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯ ಪೊಲೀಸ್ ಇಲಾಖೆಯಲ್ಲಿ ಔರಾದ್ಕರ್ ಸಮಿತಿಯ ವರದಿಯ ಶಿಫಾರಸ್ಸುಗಳೇನು; (ವಿವರ ನೀಡುವುದು)	6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಪರಿಶೀಲಿಸಲು ರಚಿಸಿದ ಸಮಿತಿಯು ನೀಡಿದ ವರದಿಯನ್ನು ಪರಿಶೀಲಿಸಿದ ಸರ್ಕಾರವು ಆದೇಶ ಸಂಖ್ಯೆ: ಆಇ 09 ಎಸ್‌ಆರ್‌ಪಿ 2019, ದಿನಾಂಕ: 16.07.2019ರಲ್ಲಿ 05 ವಿವಿಧ ವೃಂದದ ಪೊಲೀಸ್ ಅಧಿಕಾರಿಗಳ/ಸಿಬ್ಬಂದಿಗಳ ವೇತನವನ್ನು ಪರಿಷ್ಕರಿಸಿ ಆದೇಶಿಸಿದೆ ಹಾಗೂ ಸರ್ಕಾರದ ವಿವಿಧ ಆದೇಶಗಳಲ್ಲಿ ಸಮವಸ್ತ್ರ ಭತ್ಯೆ, ಸಾರಿಗೆ ಭತ್ಯೆ ಹಾಗೂ ಕಷ್ಟ ಪರಿಹಾರಗಳನ್ನು ಈಗಾಗಲೇ ಮಂಜೂರು ಮಾಡಿ ಆದೇಶಿಸಿದೆ. ಒಟ್ಟಾರೆಯಾಗಿ ಸದರಿ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದಿಂದ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 84773 ಅಧಿಕಾರಿ/ಸಿಬ್ಬಂದಿಯವರುಗಳಿಗೆ ಅನುಕೂಲವಾಗಿರುತ್ತದೆ. ಇನ್ನುಳಿದ 04 ವೃಂದದ ಅಧಿಕಾರಿ/ಸಿಬ್ಬಂದಿಗಳ ವೇತನ ಶ್ರೇಣಿ ಪರಿಷ್ಕರಿಸುವ ಕುರಿತಂತೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.
ಆ)	ಔರಾದ್ಕರ್ ಸಮಿತಿಯ ಶಿಫಾರಸ್ಸಿನಂತೆ ಪರಿಷ್ಕರಣೆಗೊಂಡಿರುವ ವೇತನ ಭತ್ಯೆಗಳಲ್ಲಿ ಹಾಲಿ ಸೇವಾನಿರತ ಪೊಲೀಸ್ ಮತ್ತು ಸಿಬ್ಬಂದಿಗಳಿಗೆ ವೇತನ ತಾರತಮ್ಯ ಉಂಟಾಗಿ, ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
ಇ)	ಹಾಗಿದ್ದಲ್ಲಿ, ಸದರಿ ತಾರತಮ್ಯವನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?	

ಸಂಖ್ಯೆ: ಹೆಚ್‌ಡಿ 117 ಇಎಫ್‌ಎಸ್ 2021

[ಆರಗ ಜ್ಞಾನೇಂದ್ರ]
ಗೃಹ ಸಚಿವರು